## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ

**ಸಿ.ಸಿ.1516/2023**

ಪಿರ್ಯಾದುದಾರರು ಃ ತರೀಕೆರೆ ಅಬಕಾರಿ ನಿರೀಕ್ಷಕರು

-ವಿರುದ್ಧ-

ಆರೋಪಿ/ತರು ಃ ಮಂಜಪ್ಪ

-ಃದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಮಂಜಪ್ಪ ಬಿನ್ ಶೆಟ್ಟಪ್ಪ, ವಾಸಃವಡ್ಡರಹಟ್ಟಿ ಗ್ರಾಮ, ಅಜ್ಜಂಪುರ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ18.04.2023 ರಂದು ಬೆಳಿಗ್ಗೆ 10-30 ರ ಸಮಯದಲ್ಲಿ ಶಿವನಿ ಗ್ರಾಮದಿಂದ ಅನುವನಹಳ್ಳಿ ಗ್ರಾಮದ ಕಡೆಗೆ ಬರುವ ಗಂಗಾದೇವಿ ಪ್ರೌಢಶಾಲೆಯ ಎದುರು ಒಂದು ಕಪ್ಪು ಮಿಶ್ರಿತ ಸಿಲ್ವರ್ ಬಣ್ಣದ ಹಿರೋ splendor pro ದ್ವಿಚಕ್ರ ವಾಹನ ಸಂ.ಕೆಎ-06/ಇಎನ್-3531 ರ ವಾಹನದಲ್ಲಿ ಆರೋಪಿಯಾದ ನೀವು ಅಕ್ರಮವಾಗಿ ಯಾವುದೇ ಪರವಾನಗಿ ಇಲ್ಲದೇ ಸದರಿ ವಾಹನದಲ್ಲಿರುವ ಸೈಡ್ ಬ್ಯಾಗ್ ನಲ್ಲಿ ಎರಡು ಕಪ್ಪು ಬಣ್ಣದ ಪ್ಲಾಸ್ಟಿಕ್ ಕವರ್ ಗಳಲ್ಲಿ 90 ಮಿಲಿಯ 47 ರಾಜಾ ವಿಸ್ಕಿಯ ಸ್ಯಾಚೇಟ್ ಗಳನ್ನು ಹೊಂದಿ, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**32** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಸದರಿ ಮದ್ಯವನ್ನು ದ್ವಿಚಕ್ರ ವಾಹನ ಸಂ.ಕೆಎ-06/ಇಎನ್-3531 ರಲ್ಲಿ ದಾಸ್ತಾನು ಹೊಂದಿದ್ದು, ಆ ಮೂಲಕ ನೀವು ಕರ್ನಾಟಕ ಅಬಕಾರಿ

ಕಾಯ್ದೆ ಕಲಂ.**38(ಎ)** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಸದರಿ ಮದ್ಯವನ್ನು ದ್ವಿಚಕ್ರ ವಾಹನ ಸಂ.ಕೆಎ-06/ಇಎನ್-3531 ರಲ್ಲಿ ದಾಸ್ತಾನು ಹೊಂದಿ ಮಾರಾಟ ಮಾಡುವ ಸಲುವಾಗಿ ಸಾಗಾಣಿಕೆ ಮಾಡುತ್ತಿದ್ದು, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**43(ಎ)** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ19.11.2024

Sd/-
(ವೈದ್ಯ ಶ್ರೀಕಾಂತ್)
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)
ದಿನಾಂಕಃ19.11.2024

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿ/ತರ ಸಹಿಃ